# ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಕೇಂದ್ರ ಕಛೇರಿ : ಬೆಂಗಳೂರು
## ಸಾರ್ವಜನಿಕ ಸಂಪರ್ಕ ಇಲಾಖೆ

**ಪತ್ರಿಕಾ ಪ್ರಕಟಣೆ**

ವಿಷಯ:ಜಾಹೀರಾತು ಸಂಖ್ಯೆ. 1/2018 ದಿನಾಂಕ:17-03-2018& 2/2018 ದಿನಾಂಕ:12-6-2018 ದಿನಾಂಕ:12-6-2018 ರನ್ವಯ ಕರೆಯಲಾದ ತಾಂತ್ರಿಕಸಹಾಯಕ ಮತ್ತು ಭದ್ರತಾ ರಕ್ಷಕ ಹುದ್ದೆಗಳಿಗೆ ದಿನಾಂಕ:2.2.2020 ರಂದು ಸಾಮಾನ್ಯ ಸಾಮರ್ಥ್ಯ ಪರೀಕ್ಷೆ ನಡೆಸುತ್ತಿರುವ ಬಗ್ಗೆ.

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವತಿಯಿಂದ ಮೇಲಿನ ಜಾಹೀರಾತುಗಳಲ್ಲಿ ಮೇಲ್ವಿಚಾರಕೇತರ ವರ್ಗದ 726 ತಾಂತ್ರಿಕ ಸಹಾಯಕ ಹಾಗೂ 200 ಭದ್ರತಾ ರಕ್ಷಕ ಹುದ್ದೆಗಳಿಗೆ ಮೆರಿಟ್ ಆಧಾರದ ಮೇಲೆ ನೇರ ನೇಮಕಾತಿಗಾಗಿ ಆನ್-ಲೈನ್ ಮೂಲಕ ಅರ್ಜಿಯನ್ನು 2018ನೇ ಸಾಲಿನಲ್ಲಿ ಸ್ವೀಕರಿಸಲಾಗಿತ್ತು. ಸದರಿ ಜಾಹೀರಾತಿಗೆ ಸ್ಪಂದಿಸಿ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ರವರ ಮುಖಾಂತರ ದಿನಾಂಕ:02-02-2020 ರ ಭಾನುವಾರದಂದು ಬೆಳಗ್ಗೆ 10.30 ರಿಂದ 12.30 ರವರೆಗೆ ತಾಂತ್ರಿಕ ಸಹಾಯಕ ಹುದ್ದೆಗೆ ಮತ್ತು ಮಧ್ಯಾಹ್ನ 2.30 ರಿಂದ 4.30 ರವರೆಗೆ ಭದ್ರತಾ ರಕ್ಷಕ ಹುದ್ದೆಗೆ ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯನ್ನು ನಡೆಸಲಾಗುತ್ತಿದೆ.

ಸದರಿ ಹುದ್ದೆಗಳ ಆಯ್ಕೆಗೆ ಯಾವುದೇ ರೀತಿಯ ಸಂದರ್ಶನ ಹಾಗೂ ಸಂದರ್ಶನದ ಅಂಕಗಳು ಇರುವುದಿಲ್ಲ. ನಿಗದಿತ ವಿದ್ಯಾರ್ಹತೆಯಲ್ಲಿ ಗಳಿಸಿದ ಶೇಕಡವಾರು ಅಂಕ ಮತ್ತು ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ನಿಯಮಾನುಸಾರ ಒಗ್ಗೂಡಿಸಿ ಮೆರಿಟ್/ಮೀಸಲಾತಿ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. **ಅಭ್ಯರ್ಥಿಗಳು ಯಾವುದೇ ಶಿಫಾರಸ್ಸು, ಪ್ರಭಾವ ಹಾಗೂ ಆಮಿಷ ಅವ್ಯವಹಾರಗಳಿಗೆ ಒಳಗಾಗಬಾರದೆಂದು ಸಂಸ್ಥೆಯು ಈ ಮೂಲಕ ಸ್ಪಷ್ಟಪಡಿಸಿದೆ.**

ಸದರಿ ಪರೀಕ್ಷೆಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು ರವರ ವೆಬ್‌ಸೈಟ್ ಆದ http://kea.kar.nic.in ನಲ್ಲಿ ಮಾಹಿತಿ ಪಡೆಯುವುದು ಹಾಗೂ ಇ-ಪ್ರವೇಶ ಪತ್ರವನ್ನು ದಿನಾಂಕ: 20-01-2020 ರಿಂದ ಡೌನ್‌ಲೋಡ್ ಮಾಡಿಕೊಳ್ಳುವುದು. ಅಭ್ಯರ್ಥಿಗಳು ತಪ್ಪದೇ ಇ-ಪ್ರವೇಶ ಪತ್ರ ಡೌನ್‌ಲೋಡ್ ಮಾಡಿಕೊಂಡು ಪರೀಕ್ಷೆಗೆ ಹಾಜರಾಗುವುದು ಹಾಗೂ ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್-ಸೈಟ್ ಆದ http://ksrtc.in ಅನ್ನು ವೀಕ್ಷಿಸುವುದು.

-ಸಹಿ-

**ನಿರ್ದೇಶಕರು(ಸಿಬ್ಬಂದಿ:ಪರಿಸರ)**